# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 134 ಗ್ರಾಪಂಸಿ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:22-07-2017

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

ಇವರಿಗೆ:

ಎಲ್ಲಾ ಜಿಲ್ಲಾ ಪಂಚಾಯತಿಯ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,

ಮಾನ್ಯರೆ,

ವಿಷಯ: ಗ್ರಾಮ ಪಂಚಾಯತಿಗಳು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಪೂರ್ವಾನುಮೋದನೆ ಪಡೆಯದೆ ಈಗಾಗಲೇ ಸ್ವಚ್ಛತಾಗಾರ ಹುದ್ದೆಗೆ ನೇಮಕ ಮಾಡಿಕೊಂಡಿರುವ ಸಿಬ್ಬಂದಿಗಳಿಗೆ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 27 ಗ್ರಾಪಂಸಿ 2015, ದಿ:09-03-2016.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ರವರ ಪತ್ರ ಸಂಖ್ಯೆ: ಜಿಪಿಇ/06/2016-17 ದಿನಾಂಕ:08-02-2017.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1) ರ ಸರ್ಕಾರದ ಪತ್ರದಲ್ಲಿ ಈಗಾಗಲೇ ಗ್ರಾಮ ಪಂಚಾಯತಿಗಳಲ್ಲಿ ಸ್ವಚ್ಛತಾಗಾರರ ಹುದ್ದೆಗೆ ನೇಮಿಸಿಕೊಂಡಿದ್ದು, 10 ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದರೆ 5000 ಜನಸಂಖ್ಯೆಗೆ ಒಂದು ಸ್ವಚ್ಛತಾಗಾರ, 9000 ಜನಸಂಖ್ಯೆಗೆ ಇಬ್ಬರು ಸ್ವಚ್ಛತಾಗಾರ ಮತ್ತು 13000 ಜನಸಂಖ್ಯೆಗೆ ಮೂರು ಸ್ವಚ್ಛತಾಗಾರ ಹುದ್ದೆಗಳಿಗೆ ನೇಮಿಸಿಕೊಂಡಿದ್ದರೆ, ಸಿಬ್ಬಂದಿ ವೆಚ್ಚ ಶೇ 40 ರ ಮಿತಿಯೊಳಗಿದ್ದಲ್ಲಿ ಮಾತ್ರ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಈಗಾಗಲೇ ಗ್ರಾಮ ಪಂಚಾಯತಿಯಿಂದ ವೇತನ ಪಡೆದಿರುವುದನ್ನು ಖಚಿತಪಡಿಸಿಕೊಂಡು, ಗ್ರಾಮ ಪಂಚಾಯತಿ ನಿರ್ಣಯ ದಿನಾಂಕದಿಂದ (ಸೇವೆಗೆ ಸೇರಿದ ದಿನಾಂಕ) ಸೇವಾ ಜೇಷ್ಠತೆಗೆ ಮಾತ್ರ ಪರಿಗಣಿಸಲು ಹಾಗೂ ತತ್ಪರಿಣಾಮವಾಗಿ ಸದರಿ ನೌಕರರು ಯಾವುದೇ ಆರ್ಥಿಕ ಸೌಲಭ್ಯಗಳಿಗೆ ಅರ್ಹರಾಗುವುದಿಲ್ಲವೆಂದು ಷರತ್ತಿಗೊಳಪಟ್ಟು ಅನುಮೋದನೆ ನೀಡುವುದು. ಹಾಗೂ ಗ್ರಾಮ ಪಂಚಾಯತಿಗಳು ಹೊಸದಾಗಿ ಯಾವುದೇ ಹೆಚ್ಚುವರಿ ಸಿಬ್ಬಂದಿಗಳನ್ನು ತೆಗೆದುಕೊಳ್ಳಬಾರದೆಂದು ತಿಳಿಸಲಾಗಿದೆ.

ಉಲ್ಲೇಖ (2) ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ರವರು ಪ್ರಸ್ತುತ ಜನಸಂಖ್ಯೆಗೆ ಅನುಗುಣವಾಗಿ ನಿಗಧಿಪಡಿಸಲಾಗಿರುವ ಗರಿಷ್ಠ 3 ಸ್ವಚ್ಛತಾಗಾರರ ಮಿತಿಯನ್ನು ಸಡಿಲಗೊಳಿಸುವ ಸಂಬಂಧ ಸರ್ಕಾರದ ಹಂತದಲ್ಲಿ ಪರಿಶೀಲಿಸಿ ಸೂಕ್ತ ಆದೇಶ ಹೊರಡಿಸಲು ಕೋರಿರುತ್ತಾರೆ.

ಈ ಬಗ್ಗೆ ಪರಿಶೀಲಿಸಲಾಗಿದ್ದು, ಈಗಾಗಲೇ ಗ್ರಾಮ ಪಂಚಾಯತಿಗಳು ಯಾತ್ರಾ / ಜಾತ್ರಾ ಸ್ಥಳಗಳಲ್ಲಿ ಅವಶ್ಯಕತೆಗನುಗುಣವಾಗಿ ನೇಮಿಸಿಕೊಂಡಿದ್ದು, 10 ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದರೆ ಸಿಬ್ಬಂದಿ ವೆಚ್ಚ ಶೇ 40 ರ ಮಿತಿಯೊಳಗಿದ್ದಲ್ಲಿ ಮಾತ್ರ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಈಗಾಗಲೇ ಗ್ರಾಮ ಪಂಚಾಯತಿಯಿಂದ ವೇತನ ಪಡೆದಿರುವುದನ್ನು ಖಚಿತಪಡಿಸಿಕೊಂಡು, ಗ್ರಾಮ ಪಂಚಾಯತಿ ನಿರ್ಣಯ ದಿನಾಂಕದಿಂದ (ಸೇವೆಗೆ ಸೇರಿದ ದಿನಾಂಕ) ಸೇವಾ ಜೇಷ್ಠತೆಗೆ ಮಾತ್ರ ಪರಿಗಣಿಸಲು ಹಾಗೂ ತತ್ಪರಿಣಾಮವಾಗಿ ಸದರಿ ನೌಕರರು ಯಾವುದೇ ಆರ್ಥಿಕ ಸೌಲಭ್ಯಗಳಿಗೆ ಅರ್ಹರಾಗುವುದಿಲ್ಲವೆಂದು ಷರತ್ತಿಗೊಳಪಟ್ಟು ಅನುಮೋದನೆ ನೀಡಲು ಕ್ರಮವಹಿಸುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

(ಟಿ.ಪಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ: ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.

1) ಎಲ್ಲಾ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು.
2) ಎಲ್ಲಾ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.